# ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಮಾಗಡಿ

## ಅಪರಾಧಿಕ ಪ್ರಕರಣ ಸಂಖ್ಯೆಃ 595 / 2016

ಪಿರ್ಯಾದುದಾರರು ಃ ನರಸಮ್ಮ ಕೋಂ ನಾರಾಯಣಪ್ಪ,
ಬ್ಯಾಡರಹಳ್ಳಿ, ಸೋಲೂರು ಹೋಬಳಿ
ಮಾಗಡಿ ತಾಲ್ಲೂಕು.

ವಿರುದ್ಧ

ಆರೋಪಿ ಃ ಎ-1 ಚನ್ನೇಗೌಡ ಬಿನ್ ಚಲುವಯ್ಯ
ವರ್ಷಗಳು, ಬ್ಯಾಡರಹಳ್ಳಿ
ಸೋಲೂರು ಹೋಬಳಿ
ಮಾಗಡಿ ತಾಲ್ಲೂಕು.

## ದೋಷಾರೋಪಣೆ

**( ಶ್ರೀಮತಿ. ಲತಾ ಜೆ., ಬಿ.ಕಾಂ. ಎಲ್.ಎಲ್.ಬಿ. ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿ ಆದ ನಾನು ನಿಮ್ಮ ವಿರುದ್ಧ ಈ ಕೆಳಕಂಡ ಆಪಾದನೆಯನ್ನು ಮಾಡುತ್ತಿದ್ದೇನೆ)**

ಮೊದಲನೆಯದಾಗಿ ದಿನಾಂಕಃ 16-06-2012 ರಂದು ಮಧ್ಯಾಹ್ನ 1 ಗಂಟೆಯ ಸಮಯದಲ್ಲಿ ಸೋಲೂರು ಹೋಬಳಿ, ಬ್ಯಾಡರಹಳ್ಳಿ ಗ್ರಾಮದಲ್ಲಿ ಏಕಾಏಕಿ ಚಾಸಾ-1 ರವರ ಮನೆಯ ಒಳಗಡೆ ಬಂದು ಬಾಯಿಗೆ ಬಂದಂತೆ ಅವಾಚ್ಯ ಶಬ್ದಗಳಿಂದ ನಿಂದಿಸಿ ಸಾರ್ವಜನಿಕವಾಗಿ ಅವಮಾನ ಪಡಿಸಿದ್ದು, ಸದರಿ ಅಪರಾಧವು ಭಾರತೀಯ ದಂಡ ಸಂಹಿತೆ ಕಲಂ-504 ರ ರೀತ್ಯಾ ಶಿಕ್ಷಾರ್ಹ ಅಪರಾಧವಾಗಿದ್ದು, ಇದು ನನ್ನ ಸಂಜ್ಞೆಗೆ ಒಳಪಡುತ್ತದೆ.

ಎರಡನೆಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀವು ಚಾಸಾ-1 ರವರನ್ನು ಮುಂಡೆ ಈ ದಿನ ನಿನ್ನನ್ನು ಬಿಡುವುದಿಲ್ಲವೆಂದು ಪ್ರಾಣ ಬೆದರಿಕೆ ಹಾಕಿದ್ದು, ಸದರಿ ಅಪರಾಧವು ಭಾರತೀಯ ದಂಡ ಸಂಹಿತೆ ಕಲಂ-506 ರ ರೀತ್ಯಾ ಶಿಕ್ಷಾರ್ಹ ಅಪರಾಧವಾಗಿದ್ದು ನನ್ನ ಸಂಜ್ಞೆಗೆ ಒಳಪಡುತ್ತದೆ.

ಮೂರನೆಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀವು ಚಾಸಾ-1 ರವರಿಗೆ ಅಪಾಯಕಾರಿ ಆಯುಧ ದೊಣ್ಣೆಯಿಂದ ಅವರ ಬಲಗಡೆಯ ಸೊಂಟಕ್ಕೆ, ಎದೆ, ಕಾಲಿಗೆ ಹೊಡೆದು ನೋವುಂಟು ಮಾಡಿದ್ದು, ಸದರಿ ಅಪರಾಧವು ಭಾರತೀಯ ದಂಡ ಸಂಹಿತೆ ಕಲಂ-324 ಸಹವಾಚಕ 34 ರ ರೀತ್ಯಾ ಶಿಕ್ಷಾರ್ಹ ಅಪರಾಧವಾಗಿದ್ದು ನನ್ನ ಸಂಜ್ಞೆಗೆ ಒಳಪಡುತ್ತದೆ.

ಕೊನೆಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ನಿಮ್ಮಗಳಲ್ಲಿ 1ನೇ ಆರೋಪಿ ಚಾಸಾ-1 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ಬಲತ್ಕಾರವಾಗಿ ಎಳೆದಾಡಿ ಸಾರ್ವಜನಿಕವಾಗಿ ಅವಮಾನ ಪಡಿಸಿದ್ದು, ಸದರಿ ಅಪರಾಧವು ಭಾರತೀಯ ದಂಡ ಸಂಹಿತೆ ಕಲಂ-354 ಸಹವಾಚಕ 34 ರ ರೀತ್ಯಾ ಶಿಕ್ಷಾರ್ಹ ಅಪರಾಧವಾಗಿದ್ದು ನನ್ನ ಸಂಜ್ಞೆಗೆ ಒಳಪಡುತ್ತದೆ.

ಪ್ರಶ್ನೆ-1 : ದೋಷಾರೋಪಣೆ ಓದಿ ಹೇಳಿದ್ದು ಅರ್ಥವಾಯಿತೇ ?

ಆರೋಪಿ ಉತ್ತರ :

ಪ್ರಶ್ನೆ-2 : ನೀವು ಈ ಆಪಾದನೆಯನ್ನು ಒಪ್ಪಿಕೊಳ್ಳುತ್ತೀರಾ ಅಥವಾ ವಿಚಾರಣೆ ಆಗಬೇಕೇ **?**

ಆರೋಪಿ ಉತ್ತರ :

ಈ ಮೇಲ್ಕಂಡ ಆಪಾದನೆಗಳನ್ನು ನೀವು ಈ ನ್ಯಾಯಾಲಯದ ಸಂಜ್ಞದೊಳಗೆ ಎಸಗಿರುವುದಾಗಿ ಈ ಮೂಲಕ ನ್ಯಾಯಾಲಯದ ವಿಚಾರಣೆಗೆ ಒಪಟ್ಟಿರುವುದಾಗಿ ಈ ಮೂಲಕ ನಿರ್ದೇಶಿಸುತ್ತೇನೆ.

( ಈ ಮೇಲ್ಕಂಡ ಆರೋಪಿತನ ಹೇಳಿಕೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ಹೇಳಿ, ಕೇಳಿ ಸರಿ ಇದೆ ಎಂದು ನನ್ನ ಸಮಕ್ಷಮ ದಿನಾಂಕಃ ರಂದು ಸಹಿಯನ್ನು ಮಾಡಿರುತ್ತೇನೆ )

( ಶ್ರೀಮತಿ. ಲತಾ ಜೆ )
ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿ ನ್ಯಾಯಾಲಯ,
ಮಾಗಡಿ.

ಆರೋಪಿ ಸಹಿ :